# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103
ದೂರವಾಣಿ : 0816–2254546 0816–2255596, 0816–2255597 ಫ್ಯಾಕ್ಸ್ : 0816–2270719

ಸಂಖ್ಯೆ: ತುವಿ:ಶೈ.ವಿ:2022–23:/160 ದಿನಾಂಕ:19.04.2023

## ಸುತ್ತೋಲೆ

ವಿಷಯ:– ಎಲ್ಲಾ ಸ್ನಾತಕೋತ್ತರ ವಿದ್ಯಾರ್ಥಿಗಳು ಪೂರ್ಣ ಪ್ರಮಾಣದ ಪ್ರವೇಶ ಶುಲ್ಕವನ್ನು ಪಾವತಿಸುವ ಕುರಿತು.

ಉಲ್ಲೇಖ:–1) ಕೆಲವು ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳ ಮನವಿಗಳು
2) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ 10.03.2023

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಇತ್ತೀಚೆಗೆ ಕೆಲವು ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು ಉಲ್ಲೇಖ(1)ರಲ್ಲಿ ಮನವಿ ಸಲ್ಲಿಸಿ, ಸ್ನಾತಕೋತ್ತರ ವಿಭಾಗಗಳಿಗೆ ಪ್ರವೇಶ ಪಡೆದು ಮಧ್ಯದಲ್ಲಿಯೇ (Discontinue) ಪ್ರವೇಶವನ್ನು ರದ್ದುಪಡಿಸಿಕೊಂಡಿರುವ ಪ್ರವೇಶಾನುಮೋದನೆಯಾದ & ಪ್ರವೇಶಾನುಮೋದನೆಯಾಗದ ವಿದ್ಯಾರ್ಥಿಗಳಿಂದ ಪೂರ್ಣ ಪ್ರಮಾಣದ ಪ್ರವೇಶ ಶುಲ್ಕವನ್ನು ಪಾವತಿಸಿಕೊಳ್ಳಬೇಕೆ ಎಂಬುದರ ಕುರಿತು ಮಾಹಿತಿ ನೀಡುವಂತೆ ಕೋರಿರುತ್ತಾರೆ.

ಉಲ್ಲೇಖ(1)ರ ಮನವಿಗಳನ್ನು ಪರಿಶೀಲಿಸಲಾಗಿ, ಉಲ್ಲೇಖ (2)ರ ಮಾನ್ಯ ಕುಲಪತಿಯವರ ಅನುಮೋದನೆ ಮೇರೆಗೆ ಸ್ನಾತಕೋತ್ತರ ವಿಭಾಗಗಳಿಗೆ ಪ್ರವೇಶ ಪಡೆದು ಮಧ್ಯದಲ್ಲಿಯೇ ಪ್ರವೇಶವನ್ನು (Discontinue) ರದ್ದುಪಡಿಸಿಕೊಂಡಿರುವ ವಿದ್ಯಾರ್ಥಿಗಳಿಗೂ, ಪ್ರವೇಶಾನುಮೋದನೆಯಾದ & ಪ್ರವೇಶಾನುಮೋದನೆಯಾಗದ ವಿದ್ಯಾರ್ಥಿಗಳಿಗೂ ಸಹ ಪೂರ್ಣ ಪ್ರಮಾಣದ ಪ್ರವೇಶ ಶುಲ್ಕವನ್ನು ಪಾವತಿಸಿಕೊಳ್ಳಬೇಕೆಂದು ಈ ಮೂಲಕ ತಿಳಿಸಿದೆ.

**ಆದ್ದರಿಂದ 2020–21ನೇ ಶೈಕ್ಷಣಿಕ ಸಾಲಿನಿಂದ ಸ್ನಾತಕೋತ್ತರ ವಿಭಾಗಗಳಿಗೆ ಪ್ರವೇಶಾತಿ ಪಡೆದ ಎಲ್ಲಾ ವಿದ್ಯಾರ್ಥಿಗಳಿಂದ ಪೂರ್ಣ ಪ್ರಮಾಣದ ಪ್ರವೇಶ ಶುಲ್ಕವನ್ನು ಪಾವತಿಸಿಕೊಳ್ಳುವಂತೆ ಈ ಮೂಲಕ ತಿಳಿಸಿದೆ.**

ಸ್ನಾತಕೋತ್ತರ ಪರೀಕ್ಷೆಗಳು ಆರಂಭವಾಗುತ್ತಿರುವುದರಿಂದ ಪ್ರವೇಶ ಶುಲ್ಕವನ್ನು ಪಾವತಿಸದಿರುವ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಹಿತದೃಷ್ಟಿಯಿಂದ ಪರೀಕ್ಷೆ ಬರೆಯಲು ಮಾತ್ರ ಅನುಮತಿ ನೀಡಿದ್ದು, ವಿಭಾಗದ ಮುಖ್ಯಸ್ಥರು ವಿದ್ಯಾರ್ಥಿಗಳಿಂದ ಮುಂದಿನ ಸೆಮಿಸ್ಟರ್‌ಗೆ ಪ್ರವೇಶಾತಿ ನೀಡುವ ಮೊದಲೇ ಪೂರ್ಣ ಪ್ರಮಾಣದ ಪ್ರವೇಶ ಶುಲ್ಕವನ್ನು ಪಾವತಿಸಿಕೊಂಡು ಹಾಗೂ ಅದರ ಮಾಹಿತಿಯನ್ನು ಶೈಕ್ಷಣಿಕ ವಿಭಾಗಕ್ಕೆ **ತಪ್ಪದೇ** ಸಲ್ಲಿಸುವಂತೆ ಈ ಮೂಲಕ ತಿಳಿಸಿದೆ.

**(ಷರ: ಪೂರ್ಣ ಪ್ರಮಾಣದ ಪ್ರವೇಶ ಶುಲ್ಕವನ್ನು ಪಾವತಿಸಿರುವ ಸ್ನಾತಕೋತ್ತರ ವಿಭಾಗಗಳನ್ನು ಹೊರತುಪಡಿಸಿ)**

ಕರಡು ಮಾನ್ಯ ಕುಲಸಚಿವರಿಂದ ಅನುಮೋದಿಸಲ್ಪಟ್ಟಿದೆ.

ಆದೇಶದ ಮೇರೆಗೆ,
Mangalahouri M.
ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ

ಗೆ,

1. ಅಧ್ಯಕ್ಷರು / ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಂಯೋಜಕರು, ಶಿರಾ ಸ್ನಾತಕೋತ್ತರ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ಭುವನಹಳ್ಳಿ, ಶಿರಾ – 572 139.
4. ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತಿಪಟೂರು – 572 201.

ಪ್ರತಿಗಳು:

1. ಕುಲಸಚಿವರು (ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.
4. ಕಚೇರಿ ಪ್ರತಿ